ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER : ವಿಶ್ವವಾಣಿ    ದಿನಾಂಕ : DATE : 30/07/2019

# ವಿಚಾರಣೆಗೆ ಹಾಜರಾಗಲು ಬೇಗ್‌ಗೆ ಎಸ್‌ಐಟಿ ಸೂಚನೆ

**ಬೆಂಗಳೂರು:** ಐಎಂಎ ಕಂಪನಿಯ ಬಹುಕೋಟಿ ವಂಚನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜು.31ಕ್ಕೆ ವಿಚಾರಣೆಗೆ ಹಾಜರಾಗುವಂತೆ ಎಸ್‌ಐಟಿ ತನಿಖಾಧಿಕಾರಿಗಳು ಶಾಸಕರಾದ ಜಮೀರ್ ಖಾನ್ ಹಾಗೂ ರೋಷನ್ ಬೇಗ್ ಅವರಿಗೆ ಸೂಚನೆ ನೀಡಿದ್ದಾರೆ.




ಸೋಮವಾರ ಎಸ್‌ಐಟಿ ತನಿಖಾಧಿಕಾರಿಗಳು ಜಮೀರ್ ಖಾನ್ ಹಾಗೂ ರೋಷನ್ ಬೇಗ್ ಅವರಿಗೆ ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ನೀಡಿದ್ದರು. ಆದರೆ, ಸೋಮವಾರ ಬಿಜೆಪಿ ಸರಕಾರ ಬಹುಮತ ಸಾಬೀತು ಪಡಿಸುವ ಹಿನ್ನೆಲೆ ಜು.31ಕ್ಕೆ ವಿಚಾರಣೆಗೆ ಹಾಜರಾಗುವಂತೆ ಎಸ್‌ಐಟಿ ಅಧಿಕಾರಿಗಳು ತಿಳಿಸಿದ್ದಾರೆ. ಮತ್ತೊಂದೆಡೆ ಇಡಿ ಅಧಿಕಾರಿಗಳು ಆರೋಪಿ ಮನ್ಸೂರ್ ಖಾನ್ ವಿಚಾರಣೆ ಮುಂದುವರಿಸಿದ್ದಾರೆ. ಆತ ನೀಡಿದ ಮಾಹಿತಿ ಆಧಾರದ ಮೇಲೆ ತನಿಖೆ ಚುರುಕುಗೊಳಿಸಿದ್ದಾರೆ.

**9 ಐಪಿಎಸ್ ಅಧಿಕಾರಿಗಳಿಗೆ ಲಂಚ?:** ಐಎಂಎ ಹಗರಣ ಗಣ್ಯ ವ್ಯಕ್ತಿಗಳ ಕೊರಳಿಗೆ ಸುತ್ತಿಕೊಳ್ಳುವ ಸಾಧ್ಯತೆಯಿದೆ. ಇಡಿ ವಶದಲ್ಲಿರುವ ಮನ್ಸೂರ್ ಹಲವು ಗಣ್ಯರು ಲಂಚ ಪಡೆದಿರುವ ಮಾಹಿತಿಯನ್ನು ಅಧಿಕಾರಿಗಳ ಮುಂದೆ ಬಾಯಿಬಿಟ್ಟಿದ್ದಾನೆ.



ಇಡಿ ವಶದಲ್ಲಿರುವ ಮನ್ಸೂರ್ 9 ಐಪಿಎಸ್ ಅಧಿಕಾರಿಗಳು ಮತ್ತು ಹಲವು ರಾಜಕೀಯ ನಾಯಕರಿಗೆ ಲಂಚ ನೀಡಿರುವ ಕುರಿತು ತನಿಖಾಧಿಕಾರಿಗಳಿಗೆ ಮಾಹಿತಿ ನೀಡಿದ್ದಾನೆ. ಕರ್ನಾಟಕದಲ್ಲಿ ಕೆಲಸ ಮಾಡಿದ್ದ ಉತ್ತರ ಪ್ರದೇಶ ಮೂಲದ ಐಪಿಎಸ್ ಅಧಿಕಾರಿಯೊಬ್ಬರು ಮನ್ಸೂರ್‌ನಿಂದ ಲಂಚ ಪಡೆದಿದ್ದರು ಎನ್ನಲಾಗಿದೆ. ದೆಹಲಿಯಲ್ಲಿ ಅವರು ಕಟ್ಟಿಸುತ್ತಿದ್ದ ಮನೆಗೆ ಪೀಠೋಪಕರಣಗಳನ್ನು ಲಂಚದ ರೂಪದಲ್ಲಿ ನೀಡಲಾಗಿತ್ತು. ಸುಮಾರು 60 ಲಕ್ಷ ರು. ಲಂಚ ಪಡೆದಿರುವ ಬಗ್ಗೆ ಮಾಹಿತಿ ಸಿಕ್ಕಿದ್ದು, ವಿಚಾರಣೆಗೆ ಹಾಜರಾಗಲು ಇಡಿ ಅಧಿಕಾರಿಗೆ ಸಮನ್ಸ್ ನೀಡುವ ಸಾಧ್ಯತೆ ಇದೆ.

ಕಂದಾಯ ಮತ್ತು ಸಹಕಾರ ಇಲಾಖೆಯ ಅಧಿಕಾರಿಗಳು ಸಹ ಹಗರಣ ಮುಚ್ಚಿಹಾಕಲು ಲಂಚ ಪಡೆದಿದ್ದರು.

ರಾಜ್ಯದ ಕೆಲವು ಪ್ರಮುಖ ರಾಜಕೀಯ ನಾಯಕರ ಹೆಸರನ್ನು ಮನ್ಸೂರ್ ಹೇಳಿದ್ದಾನೆ. ರಾಜಕೀಯ ನಾಯಕರಿಗೂ ಇಡಿ ವಿಚಾರಣೆಗಾಗಿ ಸಮನ್ಸ್ ನೀಡಲಿದೆ ಎಂದು ಮೂಲಗಳಿಂದ ತಿಳಿದು ಬಂದಿದೆ.